# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಸಾರ್ವಜನಿಕ/ಸರ್ಕಾರಿ ನೌಕರರಾದ ಶ್ರೀ ರಮೇಶ್, ಕಾರ್ಯದರ್ಶಿ, ಓರೋಹಳ್ಳಿ ಗ್ರಾಮ ಪಂಚಾಯತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಕರ್ತವ್ಯ ಲೋಪ/ದುರ್ವತನೆ ಎಸಗಿರುವ ಬಗ್ಗೆ- ಆದೇಶ.

**ಓದಲಾಗಿದೆ:**
1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ-1672/2015/ಎಆರ್‌ಎಲ್‌ಓ2, ದಿನಾಂಕ: 26-04-2017.
2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಡಿ-1672/2015/ಸನಿಕಾಸ-2, ದಿನಾಂಕ: 15/16-03-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ: 26-04-2017 ರವರ ಪತ್ರದೊಂದಿಗೆ ಕನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 12(3) ರನ್ವಯ ಮಾನ್ಯ ಉಪಲೋಕಾಯುಕ್ತರವರ ಸಲ್ಲಿಸಿರುವ ವರದಿಯಲ್ಲಿ ಶ್ರೀ ನಾರಾಯಣಮ್ಮ, ಇಂಜನಹಳ್ಳಿ ಗ್ರಾಮ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ 1) ಶ್ರೀ ರಮೇಶ, ಕಾರ್ಯದರ್ಶಿಗಳು 2) ಶ್ರೀ ಶಿವಪ್ಪ, ಬಿಲ್ ಕಲೆಕ್ಟರ್, ಓರೋಹಳ್ಳಿ ಗ್ರಾಮ ಪಂಚಾಯತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ (ಇನ್ನು ಮುಂದೆ ಕ್ರಮವಾಗಿ 1 ಮತ್ತು 2ನೇ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

**ದೂರಿನ ಸಂಕ್ಷಿಪ್ತ ವಿವರಣೆ:**

ದೂರುದಾರರು ತಮ್ಮ ದೂರಿನಲ್ಲಿ ಹೊಸಕೋಟೆ ತಾಲ್ಲೂಕು ಇಂಗನಹಳ್ಳಿ ಗ್ರಾಮದ ದೂರುದಾರರ ತಾಯಿ ನಾರಾಣಮ್ಮರವರು ದಿ:05-03-1981 ರಂದು ಇಂಜನಹಳ್ಳಿ ಗ್ರಾಮಠಾಣಾಕ್ಕೆ ಸೇರಿದ ಖಾನೇಷುಮಾರಿಬ ನಂ 9 ಮತ್ತು 10, ವಿಸ್ತೀರ್ಣ 10*18 ಗಜ ಆಸ್ತಿಯನ್ನು ನೋಂದಾಯಿತ ಕ್ರಯ ಪತ್ರದ ಮೂಲಕ ಖರೀದಿಸಿರುತ್ತಾರೆ. ಆದರೆ ಎದುರುದಾರರು ಗ್ರಾಮದ ಪಿಳ್ಳಪ್ಪ ತಂದೆ ನರಸಿಂಹಯ್ಯ ರವರ ಹೆಸರಿನಲ್ಲಿ ಸುಳ್ಳು ದಾಖಲಾತಿಗಳನ್ನು ಸೃಷ್ಠಿಸಿ ದಾಖಲೆ ಮಾಡಿರುತ್ತಾರೆ. ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಮದು ದುರು ಸಲ್ಲಿಸಿರುತ್ತಾರೆ.

1 ಮತ್ತು 2ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ 2010-11 ನೇ ಸಾಲಿನಲ್ಲಿ ಈ ಆಸ್ತಿಯ ವಿಸ್ತೀರ್ಣ 2006-07 ನೇ ಸಾಲಿನ ಪ್ರಕಾರ 60*54 ಅಡಿ ವಿಸ್ತೀರ್ಣ ಮುಂದುವರೆದಿದ್ದು, ಗ್ರಾಮದ ಪಿಳ್ಳಪ್ಪ ಎನ್ನುವವರು ಅನುಭವದಲ್ಲಿ ಇರುವಂತೆ ನಮೂನೆ 9 ಮತ್ತು 10 ನೀಡಲಾಗಿದೆ. ದಿ:20-03-2015 ರಂದು ಸ್ಥಳಕ್ಕೆ ಭೇಟಿ ನೀಡಿ ಮಹಜರ್ ಮಾಡಲಾಗಿರುತ್ತದೆ. ಆದರೆ ದೂರುದಾರರು ಈ ಮಹಜರಿಗೆ ಸಹಿ ಹಾಕಲು ನಿರಾಕರಿಸಿರುತ್ತಾರೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿರುತ್ತಾರೆ.

ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನಲ್ಲಿ ಅಂಶಗಳನ್ನು ಪುನರುಚ್ಚರಿಸಿ ತಾವು ಓಎಸ್ 62/2011 ಅಂತ ದಾವೆ ದಾಖಲಿಸಿ ಡಿಕ್ರಿ ಪಡೆದುಕೊಂಡಿದ್ದು, ಆದರೂ ಸಹ ಎದುರುದಾರರು ಸುಳ್ಳು ದಾಖಲೆ ಸೃಷ್ಟಿಸಿ ಪಿಳ್ಳಪ್ಪನ ಹೆಸರಿನಲ್ಲಿ ಖಾತೆ ಮಾಡಿರುತ್ತಾರೆ.

ದೂರುದಾರರ ದೂರು, ದಾಖಲಾತಿಗಳು, ಎದುರುದಾರರ ಆಕ್ಷೇಪಣೆ ಮತ್ತು ದಾಖಲಾತಿಗಳು ಹಾಗೂ ದೂರುದಾರರ ಪ್ರತ್ಯುತ್ತರವನ್ನು ಪರಿಶೀಲಿಸಿದಾಗ ದುರುದಾರರ ತಾಯಿ ನಾರಾಯಣಮ್ಮನವರು ಕ್ರಯ ಪತ್ರದ ಮೂಲಕ ದಿ:05-03-1981 ರಂದು ಈ ಆಸ್ತಿಯನ್ನು ಖರೀದಿಸಿದ ಕ್ರಯಪತ್ರ ಲಭ್ಯವಿರುತ್ತದೆ. ಆ ಪ್ರಕಾರ ನಾರಾಯಣಮ್ಮನ ಹೆಸರಿನಲ್ಲಿ ಆಸ್ತಿ ನಂ 9 ಮತ್ತು 10 ಇದು 2006-07 ರವರೆಗೆ ದಾಖಲಾಗಿದ್ದು ಕಂಡುಬರುತ್ತದೆ. ಆದರೆ 2011-12 ನೇ ಸಾಲಿನ ತೆರಿಗೆ ರಿಜಿಸ್ಟರ್‌ನಲ್ಲಿ ಪಿಳ್ಳಪ್ಪ ತಂದೆ ನರಸಿಂಹಯ್ಯನವರ ಹೆಸರಿನಲ್ಲಿ ಖಾತೆಯಾಗಿರುತ್ತದೆ.

ದೂರುದಾರರ ತಾಯಿ ಶ್ರೀಮತಿ ನಾರಾಯಣಮ್ಮ ಇದೇ ಆಸ್ತಿಗೆ ಸಂಬಂಧಿಸಿದಂತೆ ಓಎಸ್ 62/2011 ಅಂತ ದಾವೆ ದಾಖಲಿಸಿ ಅದರಲ್ಲಿ ಶಾಶ್ವತ ನಿರ್ಭಂಧಾಕಜ್ಞೆ ಡಿಕ್ರಿ ಪಡೆದುಕೊಂಡಿರುತ್ತಾರೆ. ಆದರೆ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಸ್ಥಳ ಪರಿಶೀಲಿಸಿ ಮಹಜರ್ ಮಾಡಿ ಆ ಪ್ರಕಾರ ಪಿಳ್ಳಪ್ಪನವರು ಸ್ವಾಧೀನದಲ್ಲಿರುವುದರಿಂದ ಅವರ

ಹೆಸರಿನಲ್ಲಿ ಖಾತೆ ಮಾಡಲಾಗಿರುತ್ತದೆ ಎಂದು ನಮೂದಿಸಿರುತ್ತಾರೆ. ಆದರೆ ಸದಾಧೀನದ ಆಧಾರದ ಮೇಲೆ ಖಾತೆ ಮಾಡುವ ಅಧಿಕಾರ ಎದುರುದಾರರಿಗೆ ಇರುವುದಿಲ್ಲ ಅಲ್ಲದೇ ಸಿವಿಲ್ ನ್ಯಾಯಾಲಯವು ದೂರುದಾರರ ತಾಯಿ ನಾರಾಯಣಮ್ಮ ಇವರೇ ಆಸ್ತಿಯ ಸದವಾಧೀನದಲ್ಲಿದ್ದಾರೆಂದು ಡಿಕ್ರಿ ನೀಡಿರುತ್ತದೆ. ಆದ್ದರಿಂದ ಎದುರುದಾರರು ಯಾವುದೇ ದಾಖಲಾತಿಗಳ ಆಧಾರವಿಲ್ಲದೇ ಪಿಳ್ಳಪ್ಪನ ಹೆಸರಿನಲ್ಲಿ ಖಾತೆ ಮಾಡಿರುವುದರಿಂದ ಕರ್ತವ್ಯದಲ್ಲಿ ನಿರ್ಲಕ್ಷ್ಯವಹಿಸಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳನ್ನು ಹಾಗೂ ಎದುರುದಾರ ಆಕಷೇಪಣೆಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡುವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ. ಹಾಗೂ 1ನೇ ಎದುರುದಾರರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರಿಸದೇ, ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. 2ನೇ ಎದುರುದಾರರು ಬಿಲ್ ಕಲೆಕ್ಟರ್ ಆಗಿದ್ದು, ಖಾತೆ ಬದಲಾವಣೆಯಲ್ಲಿ ಅವರ ಅಧಿಕಾರವಿರದ ಕಾರಣ ಅವರನ್ನು ಪ್ರಕರಣದಿಂದ ಕೈಬಿಡಲಾಗಿದೆ.

ಆದ್ದರಿಂದ 1ನೇ ಎದುರುದಾರರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೇ, ಕರ್ತವ್ಯಲೋಪವೆಸಗಿ, ದುರ್ವರ್ತನೆ ತೋರಿಸಿ ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಮದ ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ, 1966 ರ ನಿಯಮಗಳು 3(1) (i) ಮತ್ತು (ii) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿರುವುದರಿಂದ, ಅವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಶ್ರೀ ರಮೇಶ್, ಕಾರ್ಯದರ್ಶಿ, ಓರೋಹಳ್ಳಿ ಗ್ರಾಮ ಪಂಚಾಯತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ

**<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/399/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 16–05–2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ರಮೇಶ್, ಕಾರ್ಯದರ್ಶಿ, ಓರೋಹಳ್ಳಿ ಗ್ರಾಮ ಪಂಚಾಯತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧದ ಆಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ 14(ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಇವರಿಗೆ ವಹಿಸಲಾಗಿದೆ.

ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ–8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ:</u>**

1) ಮಹಾಲೇಖಪಾಲರು (ಎ ಮತು ಇ), ಕರ್ನಾಟಕ, ಬೆಂಗಳೂರು.

2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 71 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ .
6) ಶ್ರೀ ರಮೇಶ್, ಕಾರ್ಯದರ್ಶಿ, ಓರೋಹಳ್ಳಿ ಗ್ರಾಮ ಪಂಚಾಯತಿ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
7) ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.